ಬಿ.ಪಿ.ಎಲ್. ಕಾರ್ಡ್ ವಿತರಣೆ

485(1076); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಯಭಾಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅರ್ಹ ಬಡ ಕುಟುಂಬಗಳಿಗೆ ಬಿಪಿಎಲ್ ಪಡಿತರ ಚೀಟಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅರ್ಹ ಬಡ ಕುಟುಂಬಗಳಿಗೆ ಬಿಪಿಎಲ್ ಪಡಿತರ ಚೀಟಿಯನ್ನು ವಿತರಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಇ) ಯಾವಾಗ ವಿತರಿಸಲಾಗುವುದು?

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ರಾಜ್ಯ ಸಚಿವರು)

ಅ) 2006ರಲ್ಲಿ ಮನೆ–ಮನೆ ಸಮೀಕ್ಷೆ ಕೈಗೊಂಡು ಅರ್ಹ ಕುಟುಂಬಗಳನ್ನು ಗುರುತಿಸಿ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ. ತದನಂತರ 2011–12 ಹಾಗೂ 2013–14 ಆನ್‌ಲೈನ್ ಮೂಲಕ ಅರ್ಜಿಗಳನ್ನು ಪಡೆದು ಅರ್ಹ ಕುಟುಂಬಗಳಿಗೆ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.

ರಾಯಭಾಗ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಜೂನ್–2015ರ ವರೆಗೆ 2,035 ಅಂತ್ಯೋದಯ, 29,615 ಬಿಪಿಎಲ್ ಹಾಗೂ 8,679 ಎಪಿಎಲ್ ಹೀಗೆ ಒಟ್ಟು 40,329 ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ.

ಆ) ಈಗಾಗಲೇ ಅರ್ಹ ಬಡ ಕುಟುಂಬಗಳಿಗೆ ಬಿಪಿಎಲ್ ಪಡಿತರ ಚೀಟಿಯನ್ನು ವಿತರಿಸಲಾಗಿದೆ.

ಇ) ಸರ್ಕಾರದ ದಿನಾಂಕ: 01–05–2015 ರಿಂದ ಹೊಸ ಪಡಿತರ ಚೀಟಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ದಿನಾಂಕ: 27–06–2015ರವರೆಗೆ ರಾಯಭಾಗ ತಾಲ್ಲೂಕಿನ ವ್ಯಾಪ್ತಿಯಲ್ಲಿ 4,494 ಬಿಪಿಎಲ್ ಹಾಗೂ 288 ಎಪಿಎಲ್ ಪಡಿತರ ಚೀಟಿಗಾಗಿ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಸರ್ಕಾರದ ಆದೇಶದಂತೆ ಅರ್ಜಿಗಳನ್ನು ನ್ಯಾಯಬೆಲೆ ಅಂಗಡಿ ಮಟ್ಟದ ಪರಿಶೀಲನಾ ಕಾರ್ಯ ಕೈಗೊಂಡು ಅರ್ಹ ಫಲಾನುಭವಿಗಳಿಗೆ ಮಾನದಂಡಗಳನ್ವಯ ಹೊಸ ಪಡಿತರ ಚೀಟಿಗಳನ್ನು ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ನಿಗಮಗಳಿಗೆ ನೀಡುವ ಸಾಲದ ಗುರಿಯ ಹೆಚ್ಚಳ

486(1077); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಜ್ಯದಲ್ಲಿರುವ ಮೀಸಲು ವಿಧಾನಸಭಾ ಕ್ಷೇತ್ರಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವಿವಿಧ ನಿಗಮಗಳಿಂದ ಒದಗಿಸುವ ಸಾಲದ ಗುರಿಯನ್ನು ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಹೆಚ್ಚಳ ಮಾಡಲಾಗುವುದು;

ಇ) ಗಂಗಾ ಕಲ್ಯಾಣ ಯೋಜನೆಯ ಗುರಿಗಳನ್ನು ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಹೆಚ್ಚಳ ಮಾಡಲಾಗುವುದು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.